**ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ರವರ ನ್ಯಾಯಾಲಯ, ತರೀಕೆರೆ**

**ಸಿ.ಸಿ.ನಂಃ 1101/2024**

**ಫಿರ್ಯಾದುದಾರರುಃ** ಸರ್ಕಾರದ ಪರವಾಗಿ ಅಜ್ಜಂಪುರ ಪೊಲೀಸರು

-: **ವಿರುದ್ಧ** :-

**ಆರೋಪಿಃ** ಶ್ರೀ ಮರುಳಸಿದ್ದಯ್ಯ.ಬಿ.ಕೆ,
ಬಿನ್ ಶ್ರೀ ಕುಮಾರಯ್ಯ,
70 ವರ್ಷಗಳು,
ವಾಸಃ ಬುಕ್ಕಾಂಬೂದಿ ಗ್ರಾಮ,
ಅಜ್ಜಂಪುರ.

**ದೋಷಾರೋಪಣೆ**

ಶ್ರೀ. ರಾಹುಲ್ ಶೆಟ್ಟಿಗಾರ್, ಬಿ.ಕಾಂ.(Hons.), ಎಲ್‌ಎಲ್.ಬಿ., ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 13.07.2024 ರಂದು ಮಧ್ಯಾಹ್ನ 1.00 ಗಂಟೆಗೆ ಅಜ್ಜಂಪುರ ಪೋಲೀಸ್ ಠಾಣಾ ಸರಹದ್ದಿನ ಬುಕ್ಕಾಂಬೂದಿ ಗ್ರಾಮದಲ್ಲಿ ಚಾಸಾ-1/ ಶ್ರೀ ರುದ್ರಪ್ಪ ರವರು ಅವರ ಮನೆಯ ಹತ್ತಿರ ಕೆಲಸ ಮಾಡುತ್ತಿರುವಾಗ ಅವರ ಮನೆಯ ಹಿಂದೆ ಖಾಲಿ ಜಾಗದಲ್ಲಿ ಯಾರೋ ಮದ್ಯ ಸೇವನೆ ಮಾಡಿ ಖಾಲಿ ಬಾಟಲಿಗಳನ್ನು ಅವರ ಜಾಗದಲ್ಲಿ ಹಾಕಿದ್ದಾರೆಂದು ಬಾಯಿಮಾತಿನಲ್ಲಿ ಬೈಯುತ್ತಿರುವಾಗ ಅವರ ಮನೆಯ ಪಕ್ಕದ ವಾಸಿಯಾದ ನೀವು ಆರೋಪಿ ನನಗೆ ಬೈಯುತ್ತಿದ್ದೀಯಾ ಎಂದು ಚಾಸಾ-1 ರವರಿಗೆ ಬೋಳಿಮಗನೇ, ಸೂಳೆಮಗನೇ ಎಂದು ಅವರ ಶಾಂತಿಭಂಗ ಮಾಡುವ ಉದ್ದೇಶದಿಂದ ಅವಾಚ್ಯ ಶಬ್ದಗಳಿಂದ ಬೈದು ಅವಮಾನಿಸಿರುತ್ತೀರಿ. ಈ ರೀತ್ಯ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತಾ ಕಲಂ 352 ರಂತೆ ದಂಡಿಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ನೀವು ಆರೋಪಿ ಮನೆಯ ಕಾಂಪೌಂಡ್ ಹತ್ತಿರ ಇದ್ದ ಮರದ ಸೆಂಟ್ರಿಂಗ್ ತುಂಡಿನಿಂದ ಚಾಸಾ-1 ರವರ ಬಲ ಮೊಣಕೈಗೆ ಹೊಡೆದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತಾ ಕಲಂ

118(1) ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ನೀವು ಆರೋಪಿ ಚಾಸಾ-1 ರವರಿಗೆ ನಿನ್ನನ್ನು ಇಷ್ಟಕ್ಕೆ ಬಿಡುವುದಿಲ್ಲವೆಂದು ಕೊಲೆ ಬೆದರಿಕೆ ಹಾಕಿರುತ್ತೀರಿ. ಈ ರೀತ್ಯ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತಾ ಕಲಂ 351(2) ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಸದರಿ ಮೇಲ್ಕಂಡ ಆರೋಪಿಯದ ನೀವು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮೇಲೆ ಹೇಳಿದ ಅಪರಾದಗಳನ್ನು ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

ಪ್ರಃ1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿ ಉತ್ತರಃ Yes

ಪ್ರಃ2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿ ಉತ್ತರಃ Pleaded not guilty and claimed to be tried

(ಆರೋಪಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣಿಕರಿಸುತ್ತೇನೆ)

ದಿನಾಂಕ : 21.02.2025

ಸಹಿ/-

(ರಾಹುಲ್ ಶೆಟ್ಟಿಗಾರ್)

ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ

ಪ್ರ.ದ.ನ್ಯಾದಂ., ತರೀಕೆರೆ.

ಆರೋಪಿ ಸಹಿಃ